**Bangalore**
**Regional News**
**02.07.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು:**

1. ಚಿಕ್ಕಬಳ್ಳಾಪುರದ ನಂದಿಬೆಟ್ಟದಲ್ಲಿ ಸಚಿವ ಸಂಪುಟ ಸಭೆ ಪ್ರಗತಿಯಲ್ಲಿ - ಹಲವು ಪ್ರಮುಖ ಯೋಜನೆಗಳಿಗೆ ಅನುಮೋದನೆ ನಿರೀಕ್ಷೆ
2. ಕೋವಿಡ್ ಲಸಿಕೆಗೂ ಹಠಾತ್ ಹೃದಾಯಘಾತಕ್ಕೂ ಯಾವುದೇ ಸಂಬಂಧವಿಲ್ಲ - ಕೇಂದ್ರ ಆರೋಗ್ಯ ಸಚಿವಾಲಯ ಸ್ಪಷ್ಟನೆ
3. ಐಪಿಎಸ್ ಅಧಿಕಾರಿ ವಿಕಾಸ್ ಕುಮಾರ್ ಅಮಾನತು ಆದೇಶ ರದ್ದು ಪ್ರಶ್ನಿಸಿ ಹೈಕೋರ್ಟ್ ಗೆ ಸರ್ಕಾರ ಮೇಲ್ಮನವಿ - ನಾಳೆ ವಿಚಾರಣೆ
4. ಕಾಂಗ್ರೆಸ್ ಪಕ್ಷದಲ್ಲಿ ಯಾವುದೇ ಅಸಮಾಧಾನ ಇಲ್ಲ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

**<><><><>**

ಚಿಕ್ಕಬಳ್ಳಾಪುರದ ನಂದಿಬೆಟ್ಟದಲ್ಲಿ ಸಂಪುಟ ಸಭೆ ನಡೆಯುತ್ತಿದೆ. ಸಚಿವ ಸಂಪುಟ ಸಭೆಗೂ ಮುನ್ನ ಭೋಗ ನಂದೀಶ್ವರ ದೇವಾಲಯಕ್ಕೆ ಸಂಪುಟದ ಸಹೋದ್ಯೋಗಿಗಳೊಂದಿಗೆ ಭೇಟಿ ನೀಡಿ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿನ ಸಭೆಯಲ್ಲಿ ಚಿಕ್ಕಬಳ್ಳಾಪುರ, ಕೋಲಾರ ಸೇರಿದಂತೆ ಬೆಂಗಳೂರು ಜಿಲ್ಲೆಯ ಬಗ್ಗೆಯೂ ಚರ್ಚಿಸಲಾಗುವುದೆಂದು ತಿಳಿಸಿದ್ದಾರೆ. ಇದೇ ವೇಳೇ ರಾಜ್ಯ ಸರ್ಕಾರ ಸುಭದ್ರವಾಗಿದೆ. ಕಾಂಗ್ರೆಸ್ ಶಾಸಕರೆಲ್ಲರೂ ಒಗ್ಗಟ್ಟಾಗಿದ್ದು, ಸರ್ಕಾರಕ್ಕೆ ಯಾವುದೇ ಸಮಸ್ಯೆ ಇಲ್ಲ. ಐದು ವರ್ಷವೂ ತಾವೇ ಮುಖ್ಯಮಂತ್ರಿಯಾಗಿರುವುದಾಗಿ ಸ್ಪಷ್ಟಪಡಿಸಿದ್ದಾರೆ.ಮುಂದಿನ ದಿನಗಳಲ್ಲಿ ಬೆಳಗಾವಿ ವಿಭಾಗ ಮಟ್ಟದ ಸಚಿವ ಸಂಪುಟ ಸಭೆಯನ್ನು ವಿಜಯಪುರ ಜಿಲ್ಲೆಯಲ್ಲಿ ನಡೆಸಲು ಉದ್ದೇಶಿಸಲಾಗಿದೆ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ನಡೆಯುತ್ತಿರುವ ಪರಿಶಿಷ್ಟ ಜಾತಿ ಸಮೀಕ್ಷೆಯಲ್ಲಿ ನೇರವಾಗಿ ಭಾಗವಹಿಸಲು ಸಾಧ್ಯವಾಗದಿದ್ದರೆ ಆನ್ ಲೈನ್ ಮೂಲಕ ಸಮೀಕ್ಷೆಗೆ ಸಹಕರಿಸುವಂತೆ ಮನವಿ ಮಾಡಿದ್ದಾರೆ.

**<><><><>**

ಕೋವಿಡ್ ಲಸಿಕೆ ಮತ್ತು ಹಠಾತ್ ಸಾವುಗಳಿಗೆ ಯಾವುದೇ ಸಂಬಂಧವಿಲ್ಲ ಎಂದು ಐಸಿಎಂಆರ್ ಹಾಗೂ ಏಮ್ಸ್ ಅಧ್ಯಯನಗಳು ದೃಢಪಡಿಸಿದೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಸ್ಪಷ್ಟಪಡಿಸಿದೆ.ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ ಮತ್ತು ರಾಷ್ಟ್ರೀಯ ರೋಗ ನಿಯಂತ್ರಣ ಕೇಂದ್ರ ನಡೆಸಿದ ಅಧ್ಯಯನಗಳು ಭಾರತದಲ್ಲಿ ಕೋವಿಡ್-೧೯ ಲಸಿಕೆಗಳು ಸುರಕ್ಷಿತ ಮತ್ತು ಪರಿಣಾಮಕಾರಿ ಎಂದು ದೃಢಪಡಿಸಿದೆ. ೧೮ರಿಂದ ೪೫ ವರ್ಷ ವಯಸ್ಸಿನ ಯುವಕರ ಬಗ್ಗೆ ವಿಭಿನ್ನ ಸಂಶೋಧನಾ ವಿಧಾನಗಳನ್ನು ಬಳಸಿಕೊಂಡು ಎರಡು ಪೂರಕ ಅಧ್ಯಯನಗಳನ್ನು ಕೈಗೊಳ್ಳಲಾಗಿದೆ ಎಂದು ಆರೋಗ್ಯ ಸಚಿವಾಲಯ ತಿಳಿಸಿದೆ. ಪ್ರಾಮಾಣಿಕ ಸಾಕ್ಷ್ಯವಿಲ್ಲದೆ ಲಸಿಕೆಗಳ ಬಗ್ಗೆ ಹರಡುವ ಊಹಾಪೋಹಗಳು ಸಾರ್ವಜನಿಕ ವಿಶ್ವಾಸವನ್ನು ಕುಗ್ಗಿಸಬಹುದು ಎಂದು ಕೇಂದ್ರ ಆರೋಗ್ಯ ಸಚಿವಾಲಯ ಕಳವಳ ವ್ಯಕ್ತಪಡಿಸಿದೆ. ಇದು ಕೋವಿಡ್ ಸಂಕಟದ ಸಮಯದಲ್ಲಿ ಲಕ್ಷಾಂತರ ಜೀವಗಳನ್ನು ರಕ್ಷಿಸಿದ ಲಸಿಕೆಗಳ ಮೇಲೆ ಪರಿಣಾಮ ಬೀರಬಹುದು ಮತ್ತು ಸಾರ್ವಜನಿಕ ಆರೋಗ್ಯದ ದೃಷ್ಟಿಯಿಂದ ಅಪಾಯಕಾರಿಯಾಗಿದೆ ಎಂದು ಸಚಿವಾಲಯ ಅಭಿಪ್ರಾಯಪಟ್ಟಿದೆ.

<><><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಸಂಭವಿಸಿದ್ದ ಕಾಲ್ತುಳಿತ ಪ್ರಕರಣ ಸಂಬಂಧ ಐಪಿಎಸ್ ಅಧಿಕಾರಿ ವಿಕಾಸ್ ಕುಮಾರ್ ಅಮಾನತು ಆದೇಶ ರದ್ದುಗೊಳಿಸಿದ ಕೇಂದ್ರ ಆಡಳಿತಾತ್ಮಕ ನ್ಯಾಯಮಂಡಳಿ  ಕ್ರಮದ ವಿರುದ್ಧ ರಾಜ್ಯ ಸರ್ಕಾರ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದೆ.ತುರ್ತು ವಿಚಾರಣೆ ಕೋರಿ ಹೈಕೋರ್ಟ್ ವಿಭಾಗೀಯ ಪೀಠಕ್ಕೆ ಸರ್ಕಾರದ ಪರ ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ಇಂದು ಅರ್ಜಿ ಸಲ್ಲಿಸಿದ್ದಾರೆ. ಅರ್ಜಿ ಕೈಗೆತ್ತಿಕೊಂಡ ಹೈಕೋರ್ಟ್ ವಿಭಾಗೀಯ ಪೀಠ, ಇಂದೇ ವಿಚಾರಣೆಯಾಗಬೇಕೆಂಬ ತರಾತುರಿ ಯಾಕೆ ಎಂದು ಪ್ರಶ್ನಿಸಿದೆ. ಇದಕ್ಕೆ ಉತ್ತರಿಸಿದ ಎಜಿ ಶಶಿಕಿರಣ್ ಶೆಟ್ಟಿ, ಸಿಎಟಿ ಆದೇಶದ ಕಾರಣ ಅಧಿಕಾರ ವಹಿಸಿಕೊಳ್ಳಲು ಅಧಿಕಾರಿ ಮುಂದಾಗಿದ್ದಾರೆ. ಹೀಗಾಗಿ ತುರ್ತು ವಿಚಾರಣೆ ನಡೆಸಬೇಕು ಎಂದು ಮನವಿ ಮಾಡಿದರು. ಈ ವೇಳೆ ನ್ಯಾಯಾಲಯ ನಾಳೆ ವಿಚಾರಣೆ ನಡೆಸಲಾಗುವುದು ಎಂದು ತಿಳಿಸಿದೆ.

<><><>

ಕಾಂಗ್ರೆಸ್ ಪಕ್ಷದಲ್ಲಿ ಯಾವುದೇ ಅಸಮಾಧಾನ ಇಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಕ್ಷ ಸಂಘಟನೆ ಸೇರಿದಂತೆ ಪಕ್ಷದ ಆಗುಹೋಗುಗಳನ್ನು ಗಮನಿಸಲು ರಾಜ್ಯಕ್ಕೆ ರಣದೀಪ್ ಸಿಂಗ್ ಸುರ್ಜೇವಾಲ ಭೇಟಿ ನೀಡಿರುವುದಾಗಿ ತಿಳಿಸಿದ್ದಾರೆ. ಶಾಸಕ ಇಕ್ಬಾಲ್ ಹುಸೇನ್ ಗೆ ನೋಟಿಸ್ ನೀಡಿರುವ ಬಗ್ಗೆ ಪ್ರತಿಕ್ರಿಯಿಸಿ "ಪಕ್ಷದಲ್ಲಿ ಶಿಸ್ತು ಮುಖ್ಯವಾಗಿದ್ದು ಅವರಿಗೆ ನೋಟಿಸ್ ನೀಡಲಾಗಿದೆ ಎಂದು ಹೇಳಿದ್ದಾರೆ. ಮುಖ್ಯಮಂತ್ರಿ ಸ್ಥಾನದಲ್ಲಿ ಸಿದ್ದರಾಮಯ್ಯ ಅವರು ಇರುವಾಗ ಬೇರೆ ಹೆಸರು ಏಕೆ" ಎಂದು ಪ್ರಶ್ನಿಸಿದ್ದಾರೆ.ಇಂದಿನ ಸಂಪುಟ ಸಭೆಯಲ್ಲಿ "ನಾಡಪ್ರಭು ಕೆಂಪೇಗೌಡರ ಮಾಗಡಿ ಸ್ಮಾರಕ ಅಭಿವೃದ್ಧಿ ಸೇರಿದಂತೆ ನೀರಾವರಿ ಯೋಜನೆಗಳ ಅನುಷ್ಠಾನದ ಕುರಿತು ಸಚಿವ ಚರ್ಚೆ ನಡೆಸಲಾಗುವುದು" ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ನೂತನವಾಗಿ ಪ್ರಾರಂಭಗೊಳ್ಳುತ್ತಿರುವ ಚಿಕ್ಕಮಗಳೂರು- ಬೆಂಗಳೂರು- ತಿರುಪತಿ ನಡುವಿನ ರೈಲು ಸಂಚಾರಕ್ಕೆ ಇದೇ ೧೧ ರಂದು ಕೇಂದ್ರ ರೈಲ್ವೆ ಹಾಗು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಚಾಲನೆ ನೀಡಲಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಸಂಸದ ಕೋಟಾ ಶ್ರೀನಿವಾಸ ಪೂಜಾರಿ ಈಗ ವಾರಕ್ಕೆ ಒಂದು ಬಾರಿ ರೈಲು ಸಂಚಾರ ಆರಂಭಗೊಳ್ಳುತ್ತಿದೆ. ಬಳಿಕ ಇದನ್ನು ವಾರಕ್ಕೆ ೩ ದಿನ ವಿಸ್ತರಣೆ ಮಾಡಲು ಚಿಂತಿಸಲಾಗಿದೆ ಎಂದು ಹೇಳಿದ್ದಾರೆ.ಪ್ರತಿ ಶುಕ್ರವಾರ ಸಂಜೆ ೫ -೩೦ ಕ್ಕೆ ಚಿಕ್ಕಮಗಳೂರಿನಿಂದ ರೈಲು ಹೊರಡಲಿದ್ದು ಶನಿವಾರ ಬೆಳಗ್ಗೆ ೭-೪೦ಕ್ಕೆ ತಿರುಪತಿ ತಲುಪಲಿದೆ. ಪ್ರತಿ ಗುರುವಾರ ರಾತ್ರಿ ೯-೦೦ ಕ್ಕೆ ರೈಲು ತಿರುಪತಿಯಿಂದ ಹೊರಟು ಶುಕ್ರವಾರ ಬೆಳಗ್ಗೆ ೧೦-೩೦ಕ್ಕೆ ಚಿಕ್ಕಮಗಳೂರು ತಲುಪಲಿದೆ

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ವತಿಯಿಂದ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ದೇವನಹಳ್ಳಿಯಲ್ಲಿ ನಡೆದ ವನಮಹೋತ್ಸವ ಕಾರ್ಯಕ್ರಮ, ಫಲಾನುಭವಿಗಳಿಗೆ ತ್ರಿಚಕ್ರ ವಾಹನ ವಿತರಣೆ ಹಾಗೂ ಸ್ವಚ್ಛತಾ ಕೆಲಸಕ್ಕಾಗಿ ನೂತನ ಆಟೋ ವಾಹನ ಮತ್ತು ಹಿಟಾಚಿ ವಾಹನಗಳಿಗೆ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್ ಮುನಿಯಪ್ಪ ಚಾಲನೆ ನೀಡಿದರು. ಈ ವೇಳೆ ತಾಯಿಯ ಹೆಸರಿನಲ್ಲಿ ಗಿಡ ನೆಡುವ" ಹಾಗೂ ಸ್ವಚ್ಛತಾ ಕಾರ್ಯಕ್ರಮದಲ್ಲಿ ೧೫೦ ಗಿಡಗಳನ್ನು ನೆಡಲಾಯಿತು. ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದ್ದು, ಗಿಡ ಮರಗಳ ಪೋಷಣೆಗೆ ಆದ್ಯತೆ ನೀಡಬೇಕೆಂದು ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದ್ದಾರೆ.

<><><><>

ಎಸ್‌ಸಿಎಸ್‌ಪಿ, ಟಿಎಸ್‌ಪಿ ಯೋಜನೆಯಡಿ ವಿವಿಧ ಇಲಾಖೆಗಳಿಗೆ ಬಿಡುಗಡೆಯಾದ ಅನುದಾನವನ್ನು ಸರಿಯಾದ ರೀತಿಯಲ್ಲಿ ಬಳಕೆ ಮಾಡಿಕೊಳ್ಳುವ ಮೂಲಕ ಯೋಜನೆಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ದಾವಣಗೆರೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸೂಚಿಸಿದ್ದಾರೆ.೨೦೨೫-೨೬ನೇ ಸಾಲಿಗೆ ವಿವಿಧ ಇಲಾಖೆಗಳಿಗೆ ಎಸ್‌ಸಿಎಸ್‌ಪಿ, ಮತ್ತು ಟಿಎಸ್‌ಪಿ ಅನುದಾನದಡಿ ೩೦೦ ಕೋಟಿ ೪೨ ಲಕ್ಷ ರೂಪಾಯಿ ಹಂಚಿಕೆಯಾಗಿದ್ದು, ಇದರಲ್ಲಿ ೧೩೪ ಕೋಟಿ ಅನುದಾನ ಬಿಡುಗಡೆಯಾಗಿದೆ. ಬಿಡುಗಡೆಯಾದ ಅನುದಾನದಲ್ಲಿ ಶೇ ೬೯.೮೧ ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಹೇಳಿದ್ದಾರೆ.ಮೊದಲ ತ್ರೈಮಾಸಿಕದ ಅನುದಾನ ಬಿಡುಗಡೆಯಾಗದ ಇಲಾಖೆ ಅಧಿಕಾರಿಗಳು ಅನುದಾನ ಬಿಡುಗಡೆಗೆ ಪ್ರಸ್ತಾವನೆ ಸಲ್ಲಿಸುವ ಮೂಲಕ ಬಿಡುಗಡೆಗೆ ಕ್ರಮವಹಿಸಬೇಕು ಎಂದು ತಿಳಿಸಿದ್ದಾರೆ.

<><><>

ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ವಿಮಾ ಯೋಜನೆಯನ್ನು ೨೦೨೫ರ ಮುಂಗಾರು ಹಂಗಾಮಿಗೆ ವಿಜಯಪುರ ಜಿಲ್ಲೆಯಲ್ಲಿ ಕೃಷಿ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಕೃತಿ ವಿಕೋಪದಿಂದ ಬೆಳೆ ನಷ್ಟ ಸಂಭವಿಸಿದರೆ ರೈತರಿಗೆ ಪರಿಹಾರ ನೀಡುವ ಮೂಲಕ ಆರ್ಥಿಕ ಭದ್ರತೆ ಒದಗಿಸುವ ದೃಷ್ಟಿಯಿಂದ ವಿಮೆ ಯೋಜನೆ ಜಾರಿಗೆ ತರಲಾಗಿದೆ. ರೈತರು ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರಗಳು, ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಅಥವಾ ವಿಮಾ ಸಂಸ್ಥೆಯ ಪ್ರತಿನಿಧಿಯನ್ನು ಸಂಪರ್ಕಿಸಬಹುದು ಎಂದು ವಿಜಯಪುರ ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕ ಶಿವನಗೌಡ.ಎಸ್. ಪಾಟೀಲ್ ತಿಳಿಸಿದ್ದಾರೆ.

<><><>

೧. ಪರಿಶಿಷ್ಟ ಜಾತಿ ಮತ್ತು ಪಂಗಡ ಸಮುದಾಯದ ಮೇಲಿನ ದೌರ್ಜನ್ಯ ನಿಯಂತ್ರಣಕ್ಕೆ ಸೂಕ್ತ ಜಾಗೃತಿ ಮೂಡಿಸಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

೨. ಜಿಲ್ಲೆಯಲ್ಲಿ ಬೆಳೆ ಸಮೀಕ್ಷೆ ಕೆಲಸಗಳು ನಿಖರವಾಗಿರಬೇಕು ಹಾಗೂ ಸಮೀಕ್ಷೆ ಕೆಲಸಗಳನ್ನು ಚುರುಕುಗೊಳಿಸಿ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಕೃಷಿ ಇಲಾಖೆ ಅಧಿಕಾರಿಗಳಿಗೆ ತಿಳಿಸಿದ್ದಾರೆ.

೩. ಕಾರವಾರ ಜಿಲ್ಲೆಯಲ್ಲಿ ಇದೇ ೫ ರಿಂದ ೧೧ ರ ವರೆಗೆ ನಡೆಯುವ ಎಸ್.ಎಸ್.ಎಲ್.ಸಿ-೩ ಪರೀಕ್ಷೆಗಳನ್ನು ಪರೀಕ್ಷಾ ಮಾರ್ಗಸೂಚಿಗಳನ್ವಯ ಅತ್ಯಂತ ವ್ಯವಸ್ಥಿತವಾಗಿ ನಡೆಯಲು

ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಉತ್ತರಕನ್ನಡ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ಸೂಚಿಸಿದ್ದಾರೆ.

೪. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ವಚನ ಪಿತಾಮಹ ಡಾ. ಫ.ಗು ಹಳಕಟ್ಟಿ ೧೪೫ ನೇ ಜಯಂತಿ ಆಚರಿಸಲಾಯಿತು.

೫. ಕಾರವಾರ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಜುಲೈ ೧೨ ರಂದು ರಾಷ್ಟ್ರೀಯ ಲೋಕ ಅದಾಲತ್ ನಡೆಯಲಿದ್ದು, ರಾಜಿಯಾಗಬಹುದಾದ ೯ ಸಾವಿರ ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳನ್ನು ಇತ್ಯರ್ಥಪಡಿಸುವ ಗುರಿ ಹೊಂದಲಾಗಿದೆ ಎಂದು ಉತ್ತರಕನ್ನಡ ಜಿಲ್ಲಾ ಹಿರಿಯ ಸಿವಿಲ್ ನ್ಯಾಯಾಧೀಶೆ ದಿವ್ಯಶ್ರೀ ತಿಳಿಸಿದ್ದಾರೆ.

೬. ಗದಗ ಲೋಕಾಯುಕ್ತ ಅಧಿಕಾರಿಗಳಿಂದ ಇದೇ ೯ರಂದು ನರಗುಂದ ತಹಶೀಲ್ದಾರ ಕಚೇರಿ ಸಭಾಭವನದಲ್ಲಿ ಲೋಕಾಯುಕ್ತ ಜನಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮ ಜರುಗಲಿದೆ ಎಂದು ಗದಗ ಜಿಲ್ಲಾ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

೭. ಗದಗ ಜಿಲ್ಲೆಯಲ್ಲಿ ೫೦ ವರ್ಷ ಮೇಲ್ಪಟ್ಟ ಸಂಕಷ್ಟ ಪರಿಸ್ಥಿತಿಯಲ್ಲಿರುವ ಮಾಜಿ ಕುಸ್ತಿಪಟುಗಳಿಗೆ ಹಾಗೂ ಕ್ರೀಡಾಪಟುಗಳಿಗೆ ಮಾಸಾಶನವನ್ನು ಮಂಜೂರು ಮಾಡುವ ಸಲುವಾಗಿ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ , ಗದಗ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

<><><><>